**ಸಾಕ್ಷಿಗೆ ದಿನಾಂಕ 02-05-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 1 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 2 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 2(ಎ) | ಪ್ರಥಮ ಹೇಳಿಕೆಯ ಅನುವಾದಿತ ದೃಢೀಕೃತ ಪ್ರತಿ |
| ನಿ.ಪಿ 3 | ಅಪಘಾತ ಮಾಹಿತಿ ವರದಿ ದೃಢೀಕೃತ ಪ್ರತಿ |
| ನಿ.ಪಿ 4 | ಎಂ ವಿ ಐ ವರದಿಯ ದೃಢೀಕೃತ ಪ್ರತಿ |
| ನಿ.ಪಿ 5 | ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿ |
| ನಿ.ಪಿ 6 | ಕಚ್ಚಾ ನಕಾಶೆಯ ದೃಢೀಕೃತ ಪ್ರತಿ |
| ನಿ.ಪಿ 7 | ದೋಷಾರೋಪಣ ಪತ್ರದ ದೃಢೀಕೃತ ಪ್ರತಿ |
| ನಿ.ಪಿ 8 | 9 ಮೆಡಿಕಲ್ ಬಿಲ್ಲುಗಳು ಮೊತ್ತ ರೂ.33,837/- (ಅವುಗಳನ್ನು ಕ್ರಮವಾಗಿ ಕ್ರಮ ಸಂಖ್ಯೆ 1 ರಿಂದ 9 ಎಂದು ತೋರಿಸಲಾಗಿರುತ್ತದೆ.) |
| ನಿ.ಪಿ 9 | ಒಂದು ಔಷಧಿ ಚೀಟಿ |
| ನಿ.ಪಿ 10 ರಿಂದ 13 | ನಾಲ್ಕು ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |
| ನಿ.ಪಿ 14 | 2ನೇ ಅರ್ಜಿದಾರರ ಅಂಗನ್ಯೂನತ ಪ್ರಮಾಣದ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

<u>ಪಾಟೀಸವಾಲುಃ 2 ನೇ ಎದುರುದಾರರು ಗೈರುಹಾಜರು. ಈ ಕಾರಣದಿಂದ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.</u>

<u>ಮರುವಿಚಾರಣೆಃ ಇಲ್ಲ.</u>

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**